All India Radio: Bangalore
National Bulletin In Kannada
09.05.2025 : 1310hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು :**

1. ಭಾರತ-ಪಾಕ್ ಅಂತಾರಾಷ್ಟ್ರೀಯ ಗಡಿಯಲ್ಲಿ ಪಾಕಿಸ್ತಾನದಿಂದ ಕದನ ವಿರಾಮ ಉಲ್ಲಂಘನೆ : ಭಾರತದಿಂದ ತಕ್ಕ ಪ್ರತ್ಯುತ್ತರ
2. ಗಡಿಯಲ್ಲಿ ಉದ್ವಿಗ್ನ ಪರಿಸ್ಥಿತಿ ಮುಂದುವರಿಕೆ : ವಿವಿಧ ವಿಮಾನ ನಿಲ್ದಾಣಗಳಿಂದ ಹಲವು ವಿಮಾನಗಳ ಕಾರ್ಯಾಚರಣೆ ಅಮಾನತು
3. ಯುನೈಟೆಡ್ ಕಿಂಗ್‌ಡಂ ಗಾಗಿ ಪ್ರಗತಿಪರ ವ್ಯಾಪಾರ ಒಪ್ಪಂದ ಪ್ರಕಟಿಸಿದ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ : ಬ್ರಿಟನ್ ಪ್ರಧಾನಿ ಸ್ವಾಗತ
4. ಶ್ರೀಲಂಕಾದ ವಾಯುನೆಲೆ ಭೌಗೋಳೀಕ ಪ್ರದೇಶ ಬಳಸಿಕೊಳ್ಳಲು ಯಾವುದೇ ರಾಷ್ಟ್ರಕ್ಕೆ ಅವಕಾಶ ನೀಡುವುದಿಲ್ಲ : ಶ್ರೀಲಂಕಾ ಸರ್ಕಾರದ ಸ್ಪಷ್ಟನೆ
5. ಐಪಿಎಲ್ ಕ್ರಿಕೆಟ್ ನ ಎಲ್ಲಾ ಪಂದ್ಯಗಳು ಅನಿರ್ಧಿಷ್ಠ ಅವಧೀಗೆ ಮುಂದೂಡಿಕೆ : ಬಿಸಿಸಿಐ ತುರ್ತು ಸಭೆಯಲ್ಲಿ ನಿರ್ಧಾರ

******

ದೇಶದ ಉತ್ತರ ಹಾಗೂ ಪಶ್ಚಿಮ ಭಾಗದ ನಗರಗಳನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನ ಡ್ರೋನ್ ಗಳು ಹಾಗೂ ಕ್ಷಿಪಣಿಗಳನ್ನು ಬಳಸಿಕೊಂಡು ದಾಳಿ ನಡೆಸುವ ಎಲ್ಲಾ ಪ್ರಯತ್ನಗಳನ್ನು ಭಾರತೀಯ ಸಶಸ್ತ್ರ ಪಡೆಗಳು ನಿನ್ನೆ ರಾತ್ರಿ ವಿಫಲಗೊಳಿಸಿವೆ. ಜಮ್ಮು ಮತ್ತು ಕಾಶ್ಮೀರದಲ್ಲಿನ ಗಡಿ ನಿಯಂತ್ರಣ ರೇಖೆ ಯುದ್ಧಕ್ಕೂ ಪಾಕಿಸ್ತಾನದ ಸೇನಾಪಡೆಗಳು ಹಲವು ಬಾರಿ ಕದನ ವಿರಾಮವನ್ನು ಉಲ್ಲಂಘಿಸಿವೆ. ದೇಶದ ಸಾರ್ವಭೌಮತ್ವ ಮತ್ತು ಭೌಗೋಳಿಕ ಸಮಗ್ರತೆಯನ್ನು ಕಾಪಾಡಿಕೊಳ್ಳಲು ಭಾರತದ ಸೇನೆ ತನ್ನೆಲ್ಲ ಪ್ರಯತ್ನಗಳನ್ನು ಮುಂದುವರೆಸಿದೆ ಎಂದು ಸೇನೆ ತಿಳಿಸಿದೆ. ಪಾಕಿಸ್ತಾನದ ಎಲ್ಲಾ ದುಶ್ ಕೃತ್ಯಗಳನ್ನು ಭಾರತೀಯ ಸೇನೆ ವಿಫಲಗೊಳಿಸಿದೆ ಎಂದು ಸೇನೆಯ ಮೂಲಗಳು ತಿಳಿಸಿವೆ. ಅಂತಾರಾಷ್ಟ್ರೀಯ ಗಡಿ ಸಮೀಪದ ಜಮ್ಮು, ಪಠಾಣ್ಕೋಟ್, ಉದಮ್‌ಪುರ್ ಮತ್ತು ಸುತ್ತಮುತ್ತಲ ಪ್ರದೇಶಗಳಲ್ಲಿನ ಸೇನಾ ನೆಲೆಗಳನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನ ನಡೆಸಿದ ಪ್ರಯತ್ನಗಳನ್ನು ವಿಫಲಗೊಳಿಸಲಾಗಿದೆ ಎಂದು ಸಮಗ್ರ ರಕ್ಷಣಾ ಸಿಬ್ಬಂದಿಯ ಕೇಂದ್ರ ಸ್ಥಾನದ ಮೂಲಗಳು ತಿಳಿಸಿವೆ. ಈ ನಡುವೆ ಪಾಕಿಸ್ಥಾನದ ಎಲ್ಲಾ ರೀತಿಯ ದಾಳಿಗಳಿಗೆ ತಕ್ಕ ಪ್ರತ್ಯುತ್ತರ ನೀಡಲಾಗಿದೆ. ಯಾವುದೇ ಸಾವು ನೋವು ಸಂಭವಿಸಿಲ್ಲ ಎಂದು ಹೇಳಲಾಗಿದೆ. ಪಾಕಿಸ್ಥಾನ ನಡೆಸಿದ ಗುಂಡಿನ ದಾಳಿ ಕುರಿತು ರಕ್ಷಣಾ ವಿಶ್ಲೇಷಕ ಲೆಫ್ಟಿನೆಂಟ್, ಜನರಲ್ ರಾಜೀವ್ ಚೋಪ್ರಾ, ಈ ರೀತಿ ಹೇಳಿದ್ದಾರೆ.

******

ಪಾಕಿಸ್ತಾನದ ಕಡೆಯಿಂದ ಅಂತಾರಾಷ್ಟ್ರೀಯ ಗಡಿಯಲ್ಲಿ ಕದನ ವಿರಾಮ ಉಲ್ಲಂಘನೆ ಪ್ರಕರಣಗಳು ಮುಂದುವರೆದಿರುವ ಹಿನ್ನೆಲೆಯಲ್ಲಿ ಕಿಶಾನ್ ಘರ್, ಭೂಂತ್ತಾರ್ ಮತ್ತು ಲೂಧೀಯಾನ ವಿಮಾನ ನಿಲ್ದಾಣಗಳನ್ನು ಮುಚ್ಚುವಂತೆ ನಿಲ್ದಾಣಗಳ ಅಧಿಕಾರಿಗಳು ಸೂಚನೆ ನೀಡಿದ್ದಾರೆ. ಇದಕ್ಕೂ ಮುನ್ನ ನಾಗರೀಕರ ಸುರಕ್ಷತೆಗೆ ಮುನ್ನೆಚ್ಚರಿಕೆಗೆ ಕ್ರಮವಾಗಿ ರಾಜಸ್ಥಾನ ಪಂಜಾಬ್ ಜಮ್ಮು ಮತ್ತು ಕಾಶ್ಮೀರ, ಚಂಡೀಘಡ ಮತ್ತು ಹಿಮಾಚಲ ಪ್ರದೇಶ ಸೇರಿದಂತೆ ಕೆಲವು ಪ್ರಮುಖ ವಿಮಾನ ನಿಲ್ದಾಣಗಳಿಂದ ವಿಮಾನಗಳ ಕಾರ್ಯಾಚರಣೆಯನ್ನು ಈಗಾಗಲೇ ಅಮಾನತು ಪಡಿಸಲಾಗಿದೆ. ಈ ನಡುವೆ ದೇಶದ ಎಲ್ಲಾ ವಿಮಾನ ನಿಲ್ದಾಣಗಳನ್ನು ಮುಚ್ಚಲಾಗಿದೆ ಎಂಬ ಮಾಧ್ಯಮ ವರದಿಗಳನ್ನು ನಾಗರೀಕ ವಿಮಾನಯಾನ ಸಚಿವಾಲಯ ತಳ್ಳಿಹಾಕಿದೆ. ಇಂತಹ ಸುದ್ದಿಗಳಲ್ಲಿ ಸತ್ಯಾಂಶ ಇಲ್ಲ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

******

ಜಮ್ಮು ಮತ್ತು ಕಾಶ್ಮೀರದ ಸತ್ವಾರಿ, ಸಾಂಭಾ, ಆರ್.ಎಸ್.ಪುರ ಮತ್ತು ಅರ್ನಿಯಾ ಮೇಲೆ ದಾಳಿ ನಡೆಸಲು ಪಾಕಿಸ್ತಾನದಿಂದ ಉಡಾಯಿಸಲಾದ ೮ ಕ್ಷಿಪಣಿಗಳನ್ನು ಭಾರತದ ಸೇನಾಪಡೆಗಳು ತಡೆ ಹಿಡಿದಿವೆ. ವಾಯುಸೇನಾ ರಕ್ಷಣಾ ಪಡೆಗಳಿಂದ ಎಲ್ಲಾ ಕ್ಷಿಪಣಿಗಳನ್ನು ತಡೆ ಹಿಡಿಯಲಾಗಿದೆ ಮತ್ತು ನಿರ್ಬಂಧಿಸಲಾಗಿದೆ ಎಂದು ರಕ್ಷಣಾ ಮೂಲಗಳು ತಿಳಿಸಿವೆ. ಇಸ್ರೇಲ್ ಮೇಲೆ ಹಮಾಸ್ ಭಯೋತ್ಪಾಕರು ನಡೆಸಿದ ದಾಳಿಯ ಮಾದರಿಯಲ್ಲಿ ಈ ಕ್ಷಿಪಣಿಗಳ ದಾಳಿ ಕಂಡುಬರುತ್ತಿದೆ ಎಂದು ಮೂಲಗಳು ತಿಳಿಸಿವೆ. ಪಾಕಿಸ್ತಾನದ ಸೇನೆ ಹಮಾಸ್, ಭಯೋತ್ಪಾದಕ ಸಂಘಟನೆಯ ರೀತಿಯಲ್ಲಿ ವರ್ತಿಸುತ್ತಿದೆ ಮತ್ತು ಕಾರ್ಯಾಚಾರಣೆ ನಡೆಸಲು ಮುಂದಾಗಿದೆ ಎಂದು ಮೂಲಗಳು ತಿಳಿಸಿವೆ. ಪಾಕಿಸ್ತಾನ ಕ್ಷಿಪಣಿಗಳು ಮತ್ತು ಡ್ರೋನ್ ಗಳನ್ನು ಬಳಸಿಕೊಂಡು ಅಂತಾರಾಷ್ಟೀಯ ಗಡಿಯಲ್ಲಿನ ಜಮ್ಮು ಪಟಾನ್ ಕೋಟ್ ಮತ್ತು ಉದಾಮ್ ಪುರ್ ಸೇನಾ ನೆಲೆಗಳ ಮೇಲೆ ದಾಳಿ ನಡೆಸಿದೆ.

ಆದರೆ, ಈ ಕೃತ್ಯಗಳಲ್ಲಿ ಯಾವುದೇ ಸಾವುನೋವು ಸಂಭವಿಸಿಲ್ಲ. ಪಾಕಿಸ್ತಾನದ ಈ ದಾಳಿಗೆ ಭಾರತದ ಸೇನಾಪಡೆಗಳು ತಕ್ಕ ಪ್ರತ್ಯುತ್ತರ ನೀಡಿದೆ ಎಂದು ರಕ್ಷಣಾ ಮೂಲಗಳು ತಿಳಿಸಿವೆ.

******

ಪಾಕಿಸ್ತಾನ ನಿನ್ನೆ ರಾತ್ರಿ ಪಂಜಾಬ್ ನ ಪಠಾಣ್ ಕೋಟ್, ಜಲಂಧರ್, ಅಮೃತ್ ಸರ ಮತ್ತು ಭತಿಂದರ್ ಸೇರಿದಂತೆ ವಿವಿಧ ಸ್ಥಳಗಳನ್ನು ಗುರಿಯಾಗಿಸಿಕೊಂಡು ಬಹು ವಿಧದಲ್ಲಿ ನಡೆಸಿದ ದಾಳಿ ಪ್ರಯತ್ನಗಳನ್ನು ಭಾರತೀಯ ಸೇನಾ ಪಡೆಗಳು ವಿಫಲಗೊಳಿಸಿವೆ. ಗಡಿಯಲ್ಲಿ ಉದ್ವಿಗ್ನತೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಗಡಿ ಭದ್ರತಾ ಪಡೆಯ ಮಹಾನಿರ್ದೇಶಕರನ್ನು ಸಂಪರ್ಕಿಸಿ ಗಡಿಯಲ್ಲಿನ ಪರಿಸ್ಥಿತಿ ಕುರಿತು ಮಾಹಿತಿ ಪಡೆದಿದ್ದಾರೆ. ಅಲ್ಲದೆ, ಗೃಹ ಸಚಿವರು ಸಿ ಐ ಎಸ್ ಎಫ್ ಮಹಾನಿರ್ದೇಶಕರೊಂದಿಗೂ ಮಾತಾನಾಡಿ ವಿಮಾನ ನಿಲ್ದಾಣಗಳ ಭದ್ರತೆ ಕುರಿತು ಮಾಹಿತಿ ಪಡೆದು ಕೊಂಡಿದ್ದಾರೆ.

******

ದೆಹಲಿ ವಿಮಾನ ನಿಲ್ದಾಣದಲ್ಲಿ ಎಂದಿನಂತೆ ವಿಮಾನ ಕಾರ್ಯಾಚರಣೆಗಳು ಮುಂದುವರೆಯಲಿವೆ. ಅದಾಗ್ಯೂ ಬಾಹ್ಯಾಕಾಶದಲ್ಲಿನ ಪರಿಸ್ಥಿತಿ ಮತ್ತು ಬಿಗಿ ಭದ್ರತಾ ಕ್ರಮಗಳಿಂದಾಗಿ ಕೆಲವು ವಿಮಾನ ಹಾರಾಟದ ಸಮಯದ ಮೇಲೆ ಪರಿಣಾಮ ಬೀರಬಹುದು ಎಂದು ದೆಹಲಿ ವಿಮಾನ ನಿಲ್ದಾಣದ ಪ್ರಾಧಿಕಾರ ತನ್ನ ಸಲಹಾ ಪಟ್ಟಿಯಲ್ಲಿ ತಿಳಿಸಿದೆ. ಈ ಎಲ್ಲಾ ರೀತಿಯ ಕ್ರಮಗಳು ಸುಸೂತ್ರವಾಗಿ ಮುಂದುವರೆಯಲಿ ವಿಮಾನ ಪ್ರಯಾಣಿಕರು ಭದ್ರತಾ ಸಿಬ್ಬಂದಿ ಮತ್ತು ವಿಮಾನ ನಿಲ್ದಾಣ ಸಿಬ್ಬಂದಿ ಜೊತೆ ಸಹಕರಿಸಬೇಕೆಂದು ಪ್ರಾಧಿಕಾರ ಮನವಿ ಮಾಡಿದೆ. ಪ್ರತಿಯೊಬ್ಬರು ಯಾವುದೇ ರೀತಿಯ ವದಂತಿಗಳಿಗೆ ಕಿವಿಗೊಡದೆ ಅಧಿಕೃತ ಮೂಲಗಳು ನೀಡುವ ಮಾಹಿತಿ ಮೇಲೆ ವಿಶ್ವಾಸ ಇಡಬೇಕು ಎಂದು ಮನವಿ ಮಾಡಲಾಗಿದೆ.

******

ಕೇರಳದಲ್ಲಿ ೪೨ ವರ್ಷದ ಮಹಿಳೆಯೊಬ್ಬರಲ್ಲಿ ನಿಫಾ ವೈರಸ್ ಸೋಂಕು ಇರುವುದು ಪತ್ತೆಯಾದ ಹಿನ್ನೆಲೆಯಲ್ಲಿ ಮಲಪುರಂ ಜಿಲ್ಲೆಯ ವಿವಿಧ ಭಾಗಗಳನ್ನು ಕಂಟೈನ್ಮೆಂಟ್ ಜೋನ್‌ಗಳಾಗಿ ಘೋಷಿಸಲಾಗಿದೆ. ವಾಲಾಂಚರಿ ಮತ್ತು ಸುತ್ತಮುತ್ತಲ ಪಂಚಾಯತಿ ವ್ಯಾಪ್ತಿಯಲ್ಲಿ ಈ ರೀತಿಯ ಮುನ್ನೆಚ್ಚರಿಕೆ ವಹಿಸಲಾಗಿದೆ ಎಂದು ರಾಜ್ಯದ ಆರೋಗ್ಯ ಸಚಿವೆ ವೀಣಾ ಜಾರ್ಜ್ ನಿನ್ನೆ ರಾತ್ರಿ ಮಲಪುರಂ ನಲ್ಲಿ ಹೇಳಿದ್ದಾರೆ.

******

ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಯುನೈಟೆಡ್ ಕಿಂಗ್ ಡಂ ನೊಂದಿಗೆ ಪ್ರಗತಿಪರ ವ್ಯಾಪಾರ ಒಪ್ಪಂದವನ್ನು ನಿನ್ನೆ ಪ್ರಕಟಿಸಿದ್ದಾರೆ. ಹಲವು ವಿಷಯಗಳಲ್ಲಿ ಇದು ಮೊದಲನೆಯದಾಗಿದೆ ಎಂದು ಡೋನಾಲ್ಡ್ ಟ್ರಂಪ್ ಬಣ್ಣಿಸಿದ್ದಾರೆ. ಆಯ್ದ ಬ್ರಿಟಿಷ್ ಕಾರುಗಳ ಆಮದು ಮೇಲಿನ ತೆರಿಗೆಗಳನ್ನು ಈ ಒಪ್ಪಂದದಲ್ಲಿ ಕಡಿತಗೊಳಿಸಲಾಗಿದೆ. ಕೆಲವು ಉಕ್ಕು ಮತ್ತು ಅಲ್ಯುಮಿನಿಯಂ ವಸ್ತುಗಳನ್ನು ಸುಂಕ ಮುಕ್ತಗೊಳಿಸಲಾಗಿದೆ. ಆದರೂ ಬಹುತೇಕ ಯುನೈಟೆಡ್ ಕಿಂಗ್‌ಡಂ ವಸ್ತುಗಳ ಮೇಲೆ ಶೇ.೧೦ ರಷ್ಟು ತೆರಿಗೆ ಮುಂದುವರೆಯಲಿದೆ. ಒಪ್ಪಂದ ಘೋಷಣೆ ಸಂದರ್ಭದಲ್ಲಿ ಡೋನಾಲ್ಡ್ ಟ್ರಂಪ್ ಅವರೊಂದಿಗೆ ದೂರಾವಾಣಿ ಸಂಭಾಷಣೆ ನಡೆಸಿದ ಬ್ರಿಟನ್ ಪ್ರಧಾನಿ ಕೇರ್ ಸ್ಟಾರ್ಮರ್, ಇದೊಂದು ಅತ್ಯುತ್ತಮ ಮತ್ತು ಐತಿಹಾಸಿಕ ಒಪ್ಪಂದವಾಗಿದೆ. ಯು.ಕೆ. ಕಾರು ತಯಾರಕರು ಮತ್ತು ಉಕ್ಕು ಉತ್ಪಾದಕರ ಹಿತ ಕಾಪಾಡುವುದಾಗಿದೆ ಎಂದು ಸಂತಸ ವ್ಯಕ್ತ ಪಡಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಡೋನಾಲ್ಡ್ ಟ್ರಂಪ್ ಉಭಯ ದೇಶಗಳ ನಡುವಿನ ಸಂಬಂಧ ವೃದ್ಧಿಗೆ ಈ ಒಪ್ಪಂದ ಸಹಕಾರಿಯಾಗಲಿದೆ ಎಂದು ಹೇಳಿದ್ದಾರೆ.

******

ಯಾವುದೇ ರಾಷ್ಟ್ರ ಮತ್ತೊಂದು ರಾಷ್ಟ್ರದ ಮೇಲೆ ದಾಳಿ ನಡೆಸಲು ಶ್ರೀಲಂಕಾದ ವಾಯುನೆಲೆ ಅಥವಾ ಭೌಗೋಳಿಕ ಪ್ರದೇಶವನ್ನು ಬಳಸಿಕೊಳ್ಳಲು ಅವಕಾಶ ನೀಡುವುದಿಲ್ಲ ಎಂದು ಶ್ರೀಲಂಕಾದ ಸಚಿವ ಸಂಪುಟದ ವಕ್ತಾರ ಸಚಿವರಾದ ಡಾ.ನಳಿಂದ ಜಯತಿಸ್ಸಾ ಸ್ಪಷ್ಟಪಡಿಸಿದ್ದಾರೆ. ಭಾರತ ಹಾಗೂ ಪಾಕಿಸ್ತಾನಗಳ ನಡುವೆ ಉದ್ವಿಗ್ನತೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಶ್ರೀಲಂಕಾ ಸರ್ಕಾರ ಈ ನಿಲುವು ತಳೆದಿದೆ ಎಂದು ಅವರು ನಿನ್ನೆ ನಡೆದ ವಾರದ ಸಂಪುಟ ಸಭೆಯ ನಂತರ ಸುದ್ದಿಗಾರರಿಗೆ ತಿಳಿಸಿದ್ದಾರೆ. ಶ್ರೀಲಂಕಾ ಯಾವಾಗಲೂ ಎಲ್ಲಾ ರೀತಿಯ ಭಯೋತ್ಪಾದಕ ಚಟುವಟಿಕೆಗಳಿಗೆ ವಿರೋಧ ವ್ಯಕ್ತ ಪಡಿಸುತ್ತಲೇ ಬಂದಿದ್ದು ಪ್ರಾದೇಶಿಕ ಶಾಂತಿ ಕಾಪಾಡಿಕೊಳ್ಳಲು ಒತ್ತು ನೀಡಿದೆ ಎಂದು ಸಚಿವರು ಹೇಳಿದ್ದಾರೆ.

******

ಅಮೇರಿಕದ ರಾಬರ್ಟ್ ಫ್ರಾನ್ಸಿಸ್ ಪ್ರಿವೋಸ್ಟ್ ಅವರು ರೋಮನ್ ಕ್ಯಾಥೋಲಿಕ್ ಚಚಿ ನ ನೂತನ ಪೋಪ್ ಆಗಿ ಗುರುವಾರ ಆಯ್ಕೆ ಆಗಿದ್ದಾರೆ. ಕ್ಯಾಥೋಲಿಕ್ ಚರ್ಚ್ ನ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಅಮೇರಿಕದ ಬಿಷಪ್ ಒಬ್ಬರು ಈ ಉನ್ನತ ಹುದ್ದೆಯನ್ನ ಅಲಂಕರಿಸಿದ್ದಾರೆ. ನೂತನ ಪೋಪ್ ಅವರನ್ನು ಇನ್ನು ಮುಂದೆ ಲಿಯೋ - ೧೪ ಎಂಬ ಹೆಸರಿನಿಂದ ಕರೆಯಲಾಗುವುದು.

******

ಭಾರತ ಮತ್ತು ಪಾಕಿಸ್ತಾನ ನಡುವೆ ಮಿಲಿಟರಿ ಸಂಘರ್ಷ ಮುಂದುವರೆದಿರುವುದರಿಂದ ಉಂಟಾಗಿರುವ ಉದ್ವಿಗ್ನ ಪರಿಸ್ಥಿತಿ ಹಿನ್ನೆಲೆಯಲ್ಲಿ ಭಾರತೀಯ ಪ್ರೀಮಿಯರ್ ಲೀಗ್ - ಐಪಿಎಲ್೨೦೨೫ರ ಋತುವಿನ ಎಲ್ಲಾ ಕ್ರಿಕೆಟ್ ಪಂದ್ಯಗಳನ್ನು ಅನಿರ್ಧಿಷ್ಟಾವಧಿಗೆ ಮುಂದೂಡಲಾಗಿದೆ. ನವದೆಹಲಿಯಲ್ಲಿಂದು ನಡೆದ ಬಿಸಿಸಿಐ ನ ತುರ್ತು ಸಭೆಯಲ್ಲಿ ಈ ನಿರ್ಧಾರವನ್ನು ಕೈಗೊಳ್ಳಲಾಗಿದೆ ಎಂದು ಮೂಲಗಳು ಐಎಎನ್‌ಎಸ್ ಗೆ ತಿಳಿಸಿವೆ. ಐಪಿಎಲ್ ಕ್ರಿಕೆಟ್ ಪಂದ್ಯಗಳನ್ನು ಅಮಾನತುಗೊಳಿಸಲಾಗಿದೆ. ಯಾವುದೇ ಸಮಯದಲ್ಲಿ ಬಿಸಿಸಿಐ ಸಮಗ್ರ ಮಾಹಿತಿಯನ್ನು ಬಿಡುಗಡೆ ಮಾಡಲಿದೆ ಎಂದು ಬಿಸಿಸಿಐ ಮೂಲಗಳು ಐಎಎನ್‌ಎಸ್ ಸುದ್ದಿ ಸಂಸ್ಥೆಗೆ ಇಂದು ತಿಳಿಸಿವೆ.

***END***